KARN010005162026

M H ANNAYYANAVAR — Digitally signed by M H ANNAYYANAVAR Date: 2026.04.01 17:31:05 +0530

| | | |
|---|---|---|
| Presented on | : | 07-03-2026 |
| Registered on | : | 07-03-2026 |
| Decided on | : | 01-04-2026 |
| Duration | : | 25 days |

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ.

**:ಉಪಸ್ಥಿತರು:**

ಶ್ರೀಯುತ ಎಂ.ಹೆಚ್. ಅಣ್ಣಯ್ಯನವರ, ಬಿಕಾಂ.ಎಲ್.ಎಲ್.ಬಿ. (ವಿಶೇಷ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಮನಗರ.

ದಿನಾಂಕ **1** ನೇ ಏಪ್ರಿಲ್ ಮಾಹೆ **2026**

ಕ್ರಿಮಿನಲ್ ಮಿಸಲೇನಿಯಸ್ ಸಂಖ್ಯೆ **163/2026**

ಅರ್ಜಿದಾರರು **:** ಶ್ರೀ ಅಪ್ಸರ್ ಅಹಮದ್,
**(ಆರೋಪಿ 2)** ಬಿನ್ ವಜೀರ್ ಅಹಮದ್,
ವಯಸ್ಸು ಸುಮಾರು 42 ವರ್ಷ,
ವಾಸಃ ಮಾರುತಿನಗರ,
ಕ್ಯಾತಸಂದ್ರ,
ತುಮಕೂರು ಸಿಟಿ, ತುಮಕೂರು ಜಿಲ್ಲೆ.

**(**ಪರವಾಗಿ ಶ್ರೀ ಕೆ.ನರಸೇಗೌಡ., ವಕೀಲರು**)**

- ವಿರುದ್ಧ -

ಎದುರುದಾರರು**:** ಸರ್ಕಾರದ ಪರವಾಗಿ ರಾಮನಗರ ಗ್ರಾಮಾಂತರ ಪೊಲೀಸ್ ಠಾಣೆ.
ಬೆಂಗಳೂರು ದಕ್ಷಿಣ ಜಿಲ್ಲೆ.
**(**ಪರವಾಗಿ ಸರ್ಕಾರಿ ಅಭಿಯೋಜಕರು**)**

*****

## ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ **483** ರಡಿ ಜಾಮೀನು ಅರ್ಜಿಯ ಮೇಲೆ ಆದೇಶ

ಅರ್ಜಿದಾರರ ಪರ ವಕೀಲರು ಮಾನ್ಯ ನ್ಯಾಯಾಲಯದಲ್ಲಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ.483 ರ ಅಡಿಯಲ್ಲಿ ಜಾಮೀನು ಅರ್ಜಿಯನ್ನು ಸಲ್ಲಿಸಿ, ರಾಮನಗರ ಗ್ರಾಮಾಂತರ ಪೊಲೀಸ್ ಠಾಣಾಧಿಕಾರಿಯವರು ಅರ್ಜಿದಾರರು ಯಾವುದೇ ರೀತಿಯ ಅಪರಾಧ ಮಾಡಿಲ್ಲದಿದ್ದರೂ ಸಹಿತ ಅರ್ಜಿದಾರರ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿದ್ದು, ಅರ್ಜಿದಾರರು ನ್ಯಾಯಾಲಯಕ್ಕೆ ಸೂಕ್ತ ಜಾಮೀನು ನೀಡಲು ತಯಾರಿದ್ದು ಹಾಗೂ ನ್ಯಾಯಾಲಯ ವಿಧಿಸುವ ಷರತ್ತುಗಳನ್ನು ಪಾಲಿಸಲು ತಯಾರಿರುತ್ತಾರೆಂದು, ಆದ್ದರಿಂದ ಅರ್ಜಿದಾರರು ಸಲ್ಲಿಸಿರುವ ಜಾಮೀನು ಅರ್ಜಿಯನ್ನು ಮಂಜೂರು ಮಾಡಬೇಕೆಂದು ವಿನಂತಿಸಿಕೊಂಡಿರುತ್ತಾರೆ.

2. ಸದರಿ ಅರ್ಜಿಗೆ ಸರಕಾರಿ ಅಭಿಯೋಜಕರು ತಕರಾರು ಸಲ್ಲಿಸಿ, ಅರ್ಜಿದಾರರ ಮೇಲೆ ಇರತಕ್ಕಂತಹ ಆಪಾದನೆ ಜಾಮೀನು ರಹಿತವಾದಂತಹ ಆಪಾದನೆಯಾಗಿರುತ್ತದೆ. ಅರ್ಜಿದಾರರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಿದಲ್ಲಿ ಪುನಃ ಇಂತಹದೇ ಕೃತ್ಯ ಎಸಗುವ ಸಾಧ್ಯತೆ ಇರುತ್ತದೆ ಹಾಗೂ ತನಿಖೆಗೆ ಸಹಕರಿಸದೇ ಸಾಕ್ಷ್ಯಾಧಾರಗಳನ್ನು ನಾಶಪಡಿಸುವ, ಸಾಕ್ಷಿದಾರರಿಗೆ ಬೆದರಿಸುವ ತನಿಖೆಗೆ ಅಡ್ಡಿಯುಂಟು ಮಾಡುವ ಸಾಧ್ಯತೆ ಇರುತ್ತದೆ ಎಂದು, ಈ ಮೇಲ್ಕಂಡ ಕಾರಣಗಳಿಂದಾಗಿ ಜಾಮೀನು ಅರ್ಜಿಯನ್ನು ತಿರಸ್ಕರಿಸಬೇಕೆಂದು ಕೇಳಿಕೊಂಡಿದ್ದಾರೆ.

3. ಅರ್ಜಿ, ತಕರಾರು ಹಾಗೂ ಉಭಯ ವಕೀಲರ ವಾದ ವಿವಾದವನ್ನು ಪರಿಶೀಲಿಸಲಾಗಿ, ಮಾನ್ಯ ನ್ಯಾಯಾಲಯಕ್ಕೆ ಈ ಕೆಳಕಂಡ ಅಂಶಗಳು ಚರ್ಚೆಗೆ ಬಂದಿರುತ್ತವೆ:-

1. ಅರ್ಜಿದಾರರ ಪರ ವಕೀಲರು ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ.483 ರಡಿ ಸಲ್ಲಿಸಿದ ಜಾಮೀನು ಅರ್ಜಿಯನ್ನು ಪುರಸ್ಕರಿಸಬಹುದೇ ?

2. ಯಾವ ಆದೇಶ ?

4. ಮೇಲ್ಕಂಡ ಅಂಶಗಳಿಗೆ ನನ್ನ ಉತ್ತರ ಈ ಕೆಳಕಂಡಂತೆ ಇರುತ್ತದೆ.

| | | |
|---|---|---|
| ಅಂಶ ನಂ.1 | : | ಸಕಾರಾತ್ಮಕವಾಗಿ |
| ಅಂಶ ನಂ.2 | : | ಅಂತಿಮ ಆದೇಶದಂತೆ ಈ ಕೆಳಕಂಡ ಕಾರಣಗಳಿಗಾಗಿ: |

## <u>ಕಾರಣಗಳು</u>

5. <u>ಅಂಶ ಸಂಖ್ಯೆ **1:**</u> ಪಿರ್ಯಾದುದಾರರು ಕೊಟ್ಟ ದೂರಿನಂತೆ ರಾಮನಗರ ಗ್ರಾಮಾಂತರ ಪೊಲೀಸ್ ಠಾಣಾಧಿಕಾರಿಗಳು ಅರ್ಜಿದಾರರ ವಿರುದ್ಧ ರಾಮನಗರ ಗ್ರಾಮಾಂತರ ಪೊಲೀಸ್ ಠಾಣಾ ಅಪರಾಧ ಸಂಖ್ಯೆ 32/2026 ಭಾರತೀಯ ನ್ಯಾಯ ಸಂಹಿತೆ 2023 ಕಲಂ.303(2) ಮತ್ತು 317(2) ರ ಅಡಿಯಲ್ಲಿ ಪ್ರಕರಣ ದಾಖಲು ಮಾಡಿರುತ್ತಾರೆ.

6. <u>ಪ್ರಕರಣದ ಸಂಕ್ಷಿಪ್ತ ಸಾರಾಂಶ:</u> ದೂರನ್ನು ಪರಿಶೀಲಿಸಲಾಗಿ, ಪಿರ್ಯಾದುದಾರರು ಅವರ ತಂದೆ ಮೆಹಬೂಬ್ ಪಾಷ ರವರ ಹೆಸರಿನಲ್ಲಿ ಕೆಎ-42-ಇಎಫ್-4738 ನಂಬರಿನ ರೂ.1,00,000/- ಬೆಲೆ ಬಾಳುವ ಸುಜುಕಿ ಅವೆನಿಸ್ ಸ್ಕೂಟರ್ ಇದ್ದು, ದಿನಾಂಕ:13-02-2026 ರಂದು ರಾತ್ರಿ 9.00 ಗಂಟೆಯದಲ್ಲಿ ಅದೇ ಸ್ಕೂಟರ್‌ನಲ್ಲಿ ರಾಮನಗರ ವಡೇರಹಳ್ಳಿ ಬಳಿ ಇರುವ ದರ್ಗಾಗೆ ಬಂದಿದ್ದು, ಆಗ ಸ್ಕೂಟರ್‌ನ್ನು ದರ್ಗಾ ಬಳಿ

ನಿಲ್ಲಿಸಿ ಪ್ರಾರ್ಥನೆ ಮಾಡಿ ವಾಪಸ್ಸು ರಾತ್ರಿ 11.00 ಗಂಟೆಗೆ ಬಂದು ನೋಡಲಾಗಿ ಸದರಿಯವರ ಸ್ಕೂಟರ್ ಕಾಣಿಸಲಿಲ್ಲ. ಕೂಡಲೇ ಹುಡುಕಲಾಗಿ ಎಲ್ಲಿಯೂ ಕಾಣಲಿಲ್ಲ. ಯಾರೋ ಕಳ್ಳರು ಪಿರ್ಯಾದುದಾರರ ಸ್ಕೂಟರ್‌ನ್ನು ಕಳ್ಳತನ ಮಾಡಿಕೊಂಡು ಹೋಗಿದ್ದು, ಇಲ್ಲಿಯವರೆಗೆ ಎಲ್ಲಾ ಕಡೆ ಹುಡುಕಲಾಗಿ ಸ್ಕೂಟರ್ ಪತ್ತೆಯಾಗಿರುವುದಿಲ್ಲ. ಈ ಕಾರಣದಿಂದ ಪಿರ್ಯಾದಿ ಅರ್ಜಿದಾರರ ವಿರುದ್ಧ ಎದುರುದಾರ ಪೊಲೀಸ್ ಠಾಣೆಯಲ್ಲಿ ದೂರು ಕೊಟ್ಟಿರುತ್ತಾರೆ.

7. ಅರ್ಜಿದಾರರ ಮೇಲೆ ಇರುವಂತ ಆಪಾದನೆ ಜಾಮೀನು ರಹಿತವಾದಂತಹ ಆಪಾದನೆ ಆಗಿದ್ದರೂ ಸಹಿತ ಜೀವಾವಧಿ ಶಿಕ್ಷೆ ಮತ್ತು ಮರಣ ದಂಡಣೆ ಶಿಕ್ಷೆ ವಿಧಿಸತಕ್ಕಂತ ಅಪರಾದ ಆಗಿರುವುದಿಲ್ಲ. ಮಾನ್ಯ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ ವಿಚಾರಣೆ ಮಾಡತಕ್ಕಂತ ಅಪರಾದ ಆಗಿರುತ್ತದೆ.

8. ಕೇಸು ಡೈರಿ ಪರಿಶೀಲಿಸಲಾಗಿ, ಎದುರುದಾರ ಪೊಲೀಸರು ಅರ್ಜಿದಾರರನ್ನು ದಿನಾಂಕಃ24-2-2024 ರಂದು ದಸ್ತಗಿರಿ ಮಾಡಿ ನಂತರ ಪೊಲೀಸ್ ಅಭಿರಕ್ಷೆಗೆ ಪಡೆದುಕೊಂಡು ತನಿಖೆಯನ್ನು ಮಾಡಿದ್ದು, ಸ್ಥಳ ಮಹಜರ್, ಅಮಾನತ್ ಮಹಜರ್, ಸ್ವ ಇಚ್ಛಾ ಹೇಳಿಕೆಯನ್ನು ಪಡೆದುಕೊಂಡು ಮುಂದಿನ ತನಿಖೆಗೆ ಅವಶ್ಯಕತೆ ಇರುವುದಿಲ್ಲ ಅಂತ ಪರಿಗಣಿಸಿ ಆರೋಪಿಯನ್ನ ನ್ಯಾಯಾಂಗ ಬಂಧನಕ್ಕೆ ಕಳುಹಿಸಿರುವುದರಿಂದ ಅರ್ಜಿದಾರ ಮುಂದಿನ ತನಿಖೆಗೆ ಅವಶ್ಯಕತೆ ಇರುವುದಿಲ್ಲ.

9. ವಿಚಾರಣೆ ನ್ಯಾಯಾಲಯವು ಅರ್ಜಿದಾರನ ವಿರುದ್ಧ ಸಾಕಷ್ಟು ಪ್ರಕರಣಗಳು ಇದ್ದು ಈತ ನಿರಂತರ ಕಳ್ಳತನ ಮಾಡುವ ಆರೋಪಿ ಅಗಿರುತ್ತಾನೆ. ಆತನ ಮೇಲೆ ಸುಮಾರು 13 ಪ್ರಕರಣಗಳು ಬೇರೆ ಬೇರೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದು ಆ ಒಂದು ಕಾರಣದಿಂದ ಸದರಿ ಅರ್ಜಿದಾರ ನಿರಂತರ ಕಳ್ಳತನ ಮಾಡುವ ವ್ಯಕ್ತಿ ಇರುತ್ತಾನೆ ಅಂತ ಪರಿಗಣಿಸಿ ಜಾಮಿನು ಅರ್ಜಿಯನ್ನು ಪರಿಶೀಲಿಸಲಾಗಿ, ಇದಕ್ಕೆ ಸಂಬಂಧಪಟ್ಟಂತೆ **1996 Cri.L.J.1419.Bomb, Ibrahim @ Munna Salim Shaikh - vs – State of Maharashtra**, ತೀರ್ಪನ್ನು ಪರಿಶೀಲಿಸಲಾಗಿ ಕೇವಲ ಆರೋಪಿ ಸುಮಾರು ಪ್ರಕರಣಗಳಲ್ಲಿ ಭಾಗಿಯಾಗಿರುತ್ತಾನೆ ಎಂಬ ಆಧಾರದ ಮೇಲಿನಿಂದ ಅದೇ ಒಂದು ಕಾರಣದಿಂದ ಜಾಮೀನನ್ನು ತಿರಸ್ಕರಿಸಲು ಬರಲಾರದು ಅಂತ ಪರಿಗಣಿಸಿ ಷರತ್ತಿನ ಆಧಾರದ ಮೇಲೆ ಜಾಮೀನು ಮಂಜೂರು ಮಾಡಿದ್ದರ ಬಗ್ಗೆ ತೀರ್ಪು ಇರುತ್ತದೆ, ಸದರಿ ತೀರ್ಪನ್ನು ಈ ಕೇಸಿಗೆ ಪರಿಶೀಲಿಸಲಾಗಿ ಅರ್ಜಿದಾರರ ಮೇಲೆ ಎದುರುದಾರ ಪೋಲೀಸರು ಕೇಸು ಡೈರಿಯಲ್ಲಿ ನಮೂದಿಸಿದಂತ ಪ್ರಕರಣಗಳು ಯಾವ ಹಂತದಲ್ಲಿ ಇರುತ್ತದೆ ಎಂಬುದರ ಬಗ್ಗೆ ಮಾಹಿತಿ ಇರುವುದಿಲ್ಲ. ಪ್ರಥಮ ವರ್ತಮಾನ ವರದಿಯಲ್ಲಿ ಯಾರೋ ಅಪರಿಚಿತ ವ್ಯಕ್ತಿ ಸ್ಕೂಟರನ್ನು ಕಳ್ಳತನ ಮಾಡಿಕೊಂಡು ಹೋಗಿರುತ್ತಾರೆ ಅಂತ ದೂರು ಕೊಟ್ಟಿರುತ್ತಾರೆ. ಸದರಿ ಸ್ಕೂಟರ್ ಕಳ್ಳತನ ಆಗಿ 3 ದಿವಸ ತಡವಾಗಿ ದೂರು ಕೊಟ್ಟಿರುತ್ತಾರೆ. ಆದ್ದರಿಂದ ಸದರಿ ಪ್ರಕರಣದ ವಸ್ತು ವಿಷಯವನ್ನು ಪರಿಗಣಿಸಬೇಕಾಗುತ್ತದೆ ವಿನಃ ಕೇವಲ ಬಹಳ ಪ್ರಕರಣಗಳು ಇರುತ್ತದೆ ಎಂಬ ಆಧಾರದ ಮೇಲಿನಿಂದ ಜಾಮೀನನ್ನು ತಿರಸ್ಕರಿಸಲು

ಬರಲಾರದು. ಆದ್ದರಿಂದ ಇಂತಹ ಸಂದರ್ಬದಲ್ಲಿ ಅರ್ಜಿದಾರರು ಷರತ್ತಿನ ಆಧಾರದ ಮೇಲೆ ಜಾಮೀನು ಪಡೆಯಲು ಅರ್ಹರಿರುತ್ತಾರೆ.

10. ಅರ್ಜಿದಾರರು ತುಮಕೂರು ಜಿಲ್ಲಾ ರಹವಾಸಿಯಾಗಿದ್ದು ಚರ ಮತ್ತು ಸ್ಥಿರ ಆಸ್ತಿಗಳನ್ನು ಹೊಂದಿದ್ದು ತಲೆ ಮರೆಸಿಕೊಳ್ಳುವ ಸಾಧ್ಯತೆ ಇರುವುದಿಲ್ಲ. ಇಂತಹ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ಅರ್ಜಿದಾರರಿಗೆ ಷರತ್ತಿನ ಆಧಾರದ ಮೇಲೆ ಜಾಮೀನನ್ನು ಮಂಜೂರು ಮಾಡುವುದು ಸೂಕ್ತ ಅಂತ ನ್ಯಾಯಾಲಯಕ್ಕೆ ಕಂಡುಬಂದಿರುವುದರಿಂದ ಸದರಿ ಅಂಶ ಸಂಖ್ಯೆ ***1*** ನ್ನು ಸಕಾರಾತ್ಮಕವಾಗಿ ಉತ್ತರಿಸಲಾಯಿತು.

11. ಅಂಶ ಸಂಖ್ಯೆ **2:** ಅಂಶ ಸಂಖ್ಯೆ 1 ಕ್ಕೆ ನೀಡಿದ ಕಾರಣ ಹಾಗೂ ಉತ್ತರಗಳಿಗಾಗಿ ಈ ಕೆಳಕಂಡಂತೆ ಆದೇಶಃ

## ಆದೇಶ

ಅರ್ಜಿದಾರ ಪರ ವಕೀಲರು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಲಂ.483 ರ ಅಡಿಯಲ್ಲಿ ಸಲ್ಲಿಸಿದ ಜಾಮೀನು ಅರ್ಜಿಯನ್ನು ಪುರಸ್ಕರಿಸಲಾಯಿತು.

ಅರ್ಜಿದಾರರು ಸಂಬಂಧಪಟ್ಟ ನ್ಯಾಯಾಲಯಕ್ಕೆ/ ದಂಡಾಧಿಕಾರಿಗಳ ನ್ಯಾಯಾಲಯಕ್ಕೆ ರೂ.50,000/- (ಐವತ್ತು ಸಾವಿರ ರೂಪಾಯಿ) ಸ್ವ ಮುಚ್ಚಳಿಕೆ ಪತ್ರ ಹಾಗೂ ಅಷ್ಟೇ ಮೊತ್ತದ ಒಬ್ಬ ಸೂಕ್ತ ಜಾಮೀನನ್ನು ನೀಡತಕ್ಕದ್ದು ಹಾಗೂ ಅರ್ಜಿದಾರ ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು.

<u>ಷರತ್ತುಗಳು</u>

1. ಅರ್ಜಿದಾರ ತಮ್ಮ ವಿಳಾಸಕ್ಕೆ ಸಂಬಂಧಪಟ್ಟಂತೆ ಚುನಾವಣಾ ಗುರುತಿನ ಚೀಟಿ/ಆಧಾರ್ ಕಾರ್ಡ್ ಹಾಗೂ ಇತರೆ ದಾಖಲೆಯನ್ನು ಹಾಜರುಪಡಿಸತಕ್ಕದ್ದು.

2. ಅರ್ಜಿದಾರ ಅಭಿಯೋಜಕ ಪಕ್ಷದ ಸಾಕ್ಷಿಗಳನ್ನು ಯಾವುದೇ ರೀತಿಯಿಂದಲೂ ಹೆದರಿಸತಕ್ಕದ್ದಲ್ಲ.

3. ಅರ್ಜಿದಾರ ನ್ಯಾಯಾಲಯಕ್ಕೆ ತಪ್ಪದೇ ಎಲ್ಲಾ ವಿಚಾರಣೆ ದಿನಾಂಕದಂದು ಹಾಜರಿರತಕ್ಕದ್ದು.

4. ಅರ್ಜಿದಾರ ಪುನಃ ಇಂತಹ ಪ್ರಕರಣಗಳಲ್ಲಿ ಭಾಗಿಯಾಗತಕ್ಕದ್ದಲ್ಲ.

5. ಅರ್ಜಿದಾರರು ಎದುರುದಾರ ಪೊಲೀಸ್ ಠಾಣೆಯಲ್ಲಿ ಪ್ರತಿ ಭಾನುವಾರ ಮತ್ತು ಬುಧವಾರ ಮಧ್ಯಾಹ್ನ 2 ರಿಂದ 5 ಗಂಟೆ ಒಳಗೆ ಎರಡು ತಿಂಗಳು ಹಾಜರಾತಿ ನೀಡತಕ್ಕದ್ದು.

6. ಈ ಮೇಲ್ಕಂಡ ಷರತ್ತುಗಳನ್ನು ಪೂರೈಸಿದ ನಂತರ ಅರ್ಜಿದಾರರ ಬಿಡುಗಡೆ ಮಾಡಲು ಸಂಬಂಧಪಟ್ಟಂತಹ ಬಂಧೀಖಾನೆ ಅಧೀಕ್ಷಕರಿಗೆ ಮಾಹಿತಿ ಕಳಿಸಲು ಆದೇಶಿಸಲಾಯಿತು.

ಈ ಮೇಲ್ಕಂಡ ಷರತ್ತುಗಳನ್ನು ಉಲ್ಲಂಘನೆ ಮಾಡಿದಲ್ಲಿ ತಕ್ಷಣವೇ ಅರ್ಜಿದಾರರ ಜಾಮೀನು ವಜಾ ಆಗತಕ್ಕದ್ದು ಅಂತ ಆದೇಶ ಮಾಡಲಾಯಿತು.

*(ಈ ಆದೇಶದ ಉಕ್ತಲೇಖನವನ್ನು ಶೀಘ್ರಲಿಪಿಗಾರ್ತಿ ಗ್ರೇಡ್ I ರವರಿಗೆ ನೇರವಾಗಿ ಗಣಕಯಂತ್ರ ಪರದೆಯ ಮೇಲೆ ನೀಡಿದ್ದು, ನಂತರ ಅವರು ಗಣಕೀಕರಿಸಿದ್ದನ್ನು ಓದಿ, ತಿದ್ದಿ ಇದೇ ದಿನಾಂಕ **1** ನೇ ಏಪ್ರಿಲ್ ಮಾಹೆ **2026** ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು).*

(ಎಂ.ಹೆಚ್.ಅಣ್ಣಯ್ಯನವರ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಮನಗರ.